# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ 07 ಬ್ಯಾಟರಾಯನಪುರ ವಾರ್ಡ್ ಸಮಿತಿ ಸಭೆಯ ನಡವಳಿ.

ದಿನಾಂಕ 04.12.2020 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 10.30 ಕ್ಕೆ ನೋಡಲ್ ಅಧಿಕಾರಿಗಳ ಸಮಕ್ಷಮದಲ್ಲಿ ಸಭೆಯನ್ನು ಹಮ್ಮಿಕೊಳ್ಳಲಾಯಿತು. ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ ನಂ.07, ಬ್ಯಾಟರಾಯನಪುರ ವಾರ್ಡ್‌ಗೆ ಮಾನ್ಯ ಆಯುಕ್ತರ ಆದೇಶದಂತೆ ನೋಡಲ್ ಅಧಿಕಾರಿಯಾಗಿ ನಿಯೋಜಿಸಲಾಗಿರುವ ಶ್ರೀ.ಪ್ರಕಾಶ್.ಜಿ ರವರು ಸಭೆಯಲ್ಲಿ ಹಾಜರಿದ್ದು, ಈ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಗಮನ ಹರಿಸಿ, ಕೈಗೊಂಡ ಕ್ರಮದ ಬಗ್ಗೆ ಚರ್ಚಿಸಲಾಯಿತು.

1. **ಘನತ್ಯಾಜ್ಯ ನಿರ್ವಹಣೆ:**
   1. ಪ್ರಸ್ತುತ ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಹೊಸ ಟೆಂಡರ್ ಅನ್ವಯ ಕಾರ್ಯರಂಭ ಮಾಡದೇ ಇದ್ದಲ್ಲಿ ಹಾಲಿ ನಿರ್ವಹಿಸುತ್ತಿರುವ ಗುತ್ತಿಗೆದಾರರಿಂದಲೇ ಘನತ್ಯಾಜ್ಯ ನಿರ್ವಹಣೆಯನ್ನು ನಿರ್ವಹಿಸಲು ಸೂಕ್ತ ಆದೇಶ ಪಡೆಯಲು ಕ್ರಮವಹಿಸುವುದು.
   2. ಅಂತರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆಯ ಸುಚಿತ್ವವನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದಲೇ ನಿರ್ವಹಿಸಬೇಕಾಗಿದ್ದು, ವಾರ್ಡ್ ಮಟ್ಟದ ಪೌರ ಕಾರ್ಮಿಕರಿಂದ ಸುಚಿತ್ವ ಕೆಲಸಗಳನ್ನು ಮಾಡಿಸಬಾರದೆಂದು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಅಭಿಪ್ರಾಯಪಟ್ಟಿರುತ್ತಾರೆ.
   3. ಮರಿಯಣ್ಣಪಾಳ್ಯ ಹಿರಾ ಕಾಟರರ್ಸ್ ಮತ್ತು ಗ್ರೀನ್ ಆಪ್ಪಲ್ ಅಪಾರ್ಟ್‌ಮೆಂಟ್ ಬಳಿ ವಾರ್ಡ್ ನಂ.06ರ ಸಾರ್ವಜನಿಕರು ವಾರ್ಡ್ ನಂ.07ರ ಸರಹದ್ದಿಗೆ ಕಸ ಹಾಕುತ್ತಿದ್ದು, ಇದರ ಬಗ್ಗೆ ಸೂಕ್ತ ಕ್ರಮಕೈಗೊಳ್ಳಬೇಕೆಂದು ಮನವಿ ಮಾಡಿರುತ್ತಾರೆ.
   4. ಘನತ್ಯಾಜ್ಯ ನಿರ್ವಹಣೆಗಾಗಿ ನಿಗದಿಪಡಿಸಿರುವ ಟ್ರಾಕ್ಟರ್ ಯಂತ್ರವನ್ನು ದುರಸ್ತಿಗೊಳಿಸುವುದು ಮತ್ತು ವಾರ್ಡ್ 07ರ ಕಛೇರಿ ಆವರಣದಲ್ಲಿ ನಿಲ್ಲಿಸಿರುವ ಕಾಂಪ್ಯಾಕ್ಟರ್‌ನ್ನು ದುರಸ್ಥಿ ಮಾಡಿಸಿ, ಘಣತ್ಯಾಜ್ಯಾ ನಿರ್ವಹಣೆಗೆ ಉಪಯೋಗಿಸಬಹುದಾಗಿರುತ್ತದೆ ಎಂದು ಸಭೆಯಲ್ಲಿ ನೆರೆದಿದ್ದ ಎಲ್ಲಾರು ಅಭಿಪ್ರಾಯ ವ್ಯಕ್ತ ಪಡಿಸಿರುತ್ತಾರೆ.
   5. ವಾರ್ಡ್‌ನಲ್ಲಿ ಹೆಚ್ಚಾಗಿ ಬ್ಲಾಕ್ ಸ್ಪಟ್‌ಗಳ ಕಸವನ್ನು ತೆರವು ಮಾಡದೇ ಇರುವುದು ಕಂಡುಬಂದಿದ್ದು, ಇದರ ಬಗ್ಗೆ ಸೂಕ್ತ ಕ್ರಮವಹಿಸ ಬೇಕಾಗಿರವುದರಿಂದ ಮುಂದಿನ ಸಭೆಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ರವರು ಖುದ್ದಾಗಿ ಹಾಜರಾಗಬೇಕೆಂದು ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಒಮ್ಮತವಾಗಿ ಮನವಿ ಮಾಡಿರುತ್ತಾರೆ.
2. **ಆರೋಗ್ಯ ಇಲಾಖೆ:**

1. ಕಾಫೀ ಬೋರ್ಡ್ ಬಡಾವಣೆಯ ಮುಖ್ಯರಸ್ತೆಯಲ್ಲಿರುವ ಬೀದಿ ಬದಿ ವ್ಯಾಪಾರಿಗಳನ್ನು ಸ್ಥಳದಿಂದ ತೆರವುಮಾಡುವ ಬಗ್ಗೆ ಸೂಕ್ತ ಕ್ರಮಕೈಗೊಳ್ಳುವುದು.
2. ವಸತಿ ಸಮುಚ್ಚಯಗಳಲ್ಲಿ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಪರಿಶೀಲಿಸಲು ನಿಯಮಿತ ತಪಾಸಣೆಯನ್ನು ಕೈಗೊಳ್ಳಲುವುದು.
3. ಅಂಗಡಿಗಳ ಮಾಲೀಕರು ವ್ಯಾಪಾರ ಪರವಾನಿಗೆಯನ್ನು ಪಡೆಯದೇ ವ್ಯಾಪಾರ ಮಾಡುತ್ತಿರುವುವರ ವಿರುದ್ಧ ಕ್ರಮಕೈಗೊಳ್ಳುವುದು.
4. ಸಾಂಕ್ರಮಿಕ ರೋಗ ಹರಡುವಿಕೆಯನ್ನು ಹೆಚ್ಚಿನ ಸಂಖ್ಯೆಯಲ್ಲಿ ಕೋವಿಡ್-19 ತಪಾಸಣೆ ಶಿಬಿರಗಳನ್ನು ಹಮ್ಮಿಕೊಳ್ಳುವುದು.

3. **ಕಾಮಗಾರಿ ವಿಭಾಗ:**

1. ಮಳೆಗಾಲ ಸಮಯದಲ್ಲಿ ರಸ್ತೆಯ ಮೇಲೆ ನೀರು ನಿಲ್ಲದಂತೆ ಮಳೆ ನೀರು ಹೊಗುವುದಕ್ಕೆ ಮಾಡಿರುವ ಜಾಗವನ್ನು ಶುಚಿಯಾಗಿಡುವುದು.
2. ರಸ್ತೆಗಳ ಪಾದಚಾರಿ ಮಾರ್ಗವನ್ನು ಶುಚಿಯಾಗಿಡುವುದು, ಮತ್ತು ಪಾದಚಾರಿ ಮಾರ್ಗದ ಮೇಲೆ ಸ್ಲಬ್ಸ್ ಅಥವಾ ಚಪ್ಪಡಿ ಇಲ್ಲದೇ ಇರುವುದು ಕಂಡು ಬಂದಲ್ಲಿ ಕೂಡಲೇ ಸರಿಪಡಿಸುವುದು.
3. ಸಾರ್ವಜನಿಕರಿಂದ ಯಾವುದೇ ದೂರುಗಳು ಬಂದಲ್ಲಿ ಕೂಡಲೇ ಸಹಕರಿಸಲು ಕ್ರಮಕೈಗೊಳ್ಳಲುವುದು.

4. **ವಿದ್ಯುತ್ (ಬೀದಿ ದೀಪಗಳ ನಿರ್ವಹಣೆ) ವಿಭಾಗ:**

1. ಬೀದಿ ದೀಪಗಳ ನಿರ್ವಹಣೆ ಅತ್ಯಂತ ಪ್ರಮುಖವಾದ ಕೆಲಸವಾಗಿದ್ದು, ಬೀದಿ ದೀಪಗಳನ್ನು ಅದಷ್ಟು ಸುಸ್ಥಿತಿಯಲ್ಲಿಡುವುದು.
2. ವಾರ್ಡ್ ವ್ಯಾಪ್ತಿಯಲ್ಲಿ ಆಳವಡಿಸಲಾಗಿರುವ ಎಲ್.ಇ.ಡಿ ವಿದ್ಯುತ್ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವುದರ ಬಗ್ಗೆ ಕ್ರಮವಹಿಸುವುದು.

5. **ಕಂದಾಯ ವಿಭಾಗ:**

1. ವಾರ್ಡ್ ವ್ಯಾಪ್ತಿಯಲ್ಲಿನ ಕಂದಾಯ ಪಾವತಿಯನ್ನು ಬಾಕಿ ಉಳಿಸಿಕೊಂಡಿರುವ ಪ್ರಮುಖ ಸಂಸ್ಥೆಗಳನ್ನು ಗುರುತಿಸಿ ಇವುರುಗಳಿಂದ ಕಂದಾಯವನ್ನು ವಸೂಲಿ ಮಾಡಲು ಸೂಕ್ತ ಕ್ರಮಕೈಗೊಳ್ಳಲುವುದು.

6. **ಜಲಮಂಡಳಿ ವಿಭಾಗ:**

1. ರಸ್ತೆ ಡಾಂಬರೀಕರಣ ಮುಗಿದ ನಂತರ ಸ್ಯಾನಿಟರಿ ಚೇಂಬರ್‌ಗಳ ಮಟ್ಟವನ್ನು ರಸ್ತೆ ಮಟ್ಟಕ್ಕೆ ಸರಿಪಡಿಸುವುದು.
2. ಮರಿಯಣ್ಣಪಾಳ್ಯದ ಹೀರಾ ಕೆಟರ್ಸ್ ರಸ್ತೆಯಲ್ಲಿ ನಿರ್ವಹಿಸಿರುವ ಓಳಚರಂಡಿ ಕಾಮಗಾರಿಯ ಇಳಿಜಾರು ಸರಿಯಿಲ್ಲದೆ ಇದ್ದು, ಇದನ್ನು ಕೂಡಲೇ ಪರಿಶಿಲಿಸಿ, ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿರುತ್ತಾರೆ.

3. ಜಿಕೆವಿಕೆ ಬಡಾವಣೆಯಲ್ಲಿನ ರಸ್ತೆಯ ಮೇಲೆ ನೈರ್ಮಲ್ಯ ತ್ಯಾಜ್ಯ ಹೊರಬರುತ್ತಿದ್ದು ಇದರಿಂದ ಸಾಂಕ್ರಮಿಕ ರೋಗ ಹರಡುವ ಸಂಭವವಿರುವುದರಿಂದ ಕೂಡಲೇ ಇದರ ಬಗ್ಗೆ ಕ್ರಮವಹಿಸುವುದು.
4. ಸೇಂಟ್ ಜಾನ್ಸ್ ಶಾಲೆ ರಸ್ತೆಯಲ್ಲಿ ಒಳಚರಂಡಿ ನೀರು ಉಕ್ಕಿ ಕಾಫೀ ಬೋರ್ಡ್ ಬಡಾವಣೆಯ ಉದ್ಯಾನವನದ ಆವರಣದಲ್ಲಿ ಹರಿಯುತ್ತಿದ್ದು, ಇದರ ಬಗ್ಗೆ ಸೂಕ್ತ ಕ್ರಮವಹಿಸುವುದು.
5. ರಸ್ತೆಗಳಲ್ಲಿ ಕಾವೇರಿ ನೀರಿನ ಸೋರಿಕೆ ಕಂಡುಬಂದಲ್ಲಿ ಸೋರಿಕೆಯನ್ನು ಕ್ರಮಬದ್ಧವಾಗಿ ಸರಿಪಡಿಸಿ ಕಾವೇರಿ ನೀರು ಪೋಲಾಗದಂತೆ ಕ್ರಮವಹಿಸುವುದು.
6. ತಮ್ಮ ಇಲಾಖೆ ವತಿಯಿಂದ ರಸ್ತೆ ಅಗೆದರೆ ಅದನ್ನು ನಿಯಾಮಾನುಸಾರ ಸರಿಪಡಿಸುವುದು.

**7. ತೋಟಗಾರಿಕೆ:**

1. ಅಮೃತನಗರ ಉದ್ಯಾನವನ ವಾಕಿಂಗ್ ಟ್ರಾಕ್‌ನ್ನು ಸರಿಪಡಿಸುವುದು.
2. ಕಾಫೀ ಬೋರ್ಡ್ ಬಡಾವಣೆಯ ಉದ್ಯಾನವನದಲ್ಲಿ ಒಪನ್ ಜಿಮ್/ಚಿಲ್ಡ್ರನ್ ಪ್ಲೇ ಸಾಮಾಗ್ರಿಗಳನ್ನು ಅಳವಡಿಸುವುದು.
3. ಅಮೃತನಗರ ಉದ್ಯಾನವನದಲ್ಲಿ ಔಷದಿ ಸಸ್ಯಗಳನ್ನು ನೆಡ ಬೇಕೆಂದು ಮನವಿ ಮಾಡಿರುತ್ತಾರೆ.

**8. ಅರಣ್ಯ ಇಲಾಖೆ:-**

1. ಅರಣ್ಯ ವಿಭಾಗದವರು ವಾರ್ಡ್ ಸಮಿತಿ ಸಭೆಗೆ ಹಾಜರಾಗಲು ತಿಳಿಸಿದ್ದರು ಸಹ ಸದರಿ ವಿಭಾಗದಿಂದ ಯಾರು ನಿರಂತರವಾಗಿ ಸಭೆಗಳಿಗೆ ಗೈರು ಹಾಜರಾಗುತ್ತಿರುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಬೇಸರ ವ್ಯಕ್ತಪಡಿಸಿ ಸಾರ್ವಜನಿಕ ಕುಂದುಕೊರತೆಗಳನ್ನು ಆಲಿಸಲು ಅರಣ್ಯ ಇಲಾಖೆಯವರು ಮುಂದಿನ ಸಭೆಗೆ ತಪ್ಪದೇ ಹಾಜರಾಗುವಂತೆ ಮನವಿ ಮಾಡಿರುತ್ತಾರೆ.

N.D.
ಕಾರ್ಯದರ್ಶಿ AE(…)
ವಾರ್ಡ್ 07 4/12/2020.